ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಹುಳಿಮಾವು ಕೆರೆ ಏರಿ ಒಡೆದ ದುರಂತದ ಕುರಿತು

ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-

807 (731) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದ ಹುಳಿಮಾವು ಕೆರೆ ಏರಿ ಒಡೆದ ದುರಂತವು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಅದಕ್ಕೆ ಕಾರಣವಾದ ಅಂಶಗಳು ಯಾವುವು; ಸಂಬಂಧಪಟ್ಟವರ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ;

(ಇ) ಈ ದುರಂತದಿಂದ ನಿರಾಶ್ರಿತರಾದವರ ಸಂಖ್ಯೆ ಎಷ್ಟು; ಎಷ್ಟು ಜನ ಫಲಾನುಭವಿಗಳನ್ನು ಗುರುತಿಸಲಾಗಿದೆ; ಎಷ್ಟು ಜನ ಫಲಾನುಭವಿಗಳಿಗೆ ಪರಿಹಾರ ನೀಡಲಾಗಿದೆ; (ಮಾಹಿತಿ ನೀಡುವುದು)

(ಈ) ಈವರೆಗೆ ಎಷ್ಟು ಮೊತ್ತದ ಪರಿಹಾರವನ್ನು ವಿತರಿಸಲಾಗಿದೆ; ಎಷ್ಟು ಮೊತ್ತವನ್ನು ಪರಿಹಾರಕ್ಕಾಗಿ ಕಾಯ್ದಿರಿಸಲಾಗಿದೆ?